# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 441 ಗ್ರಾಪಂಅ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:09-01-2017

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

ಇವರಿಗೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯಿತಿ,
ಉತ್ತರ ಕನ್ನಡ, ದಕ್ಷಿಣ ಕನ್ನಡ,
ಉಡುಪಿ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಕೊಡಗು.

ಮಾನ್ಯರೆ,

ವಿಷಯ: ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಸಂಬಂಧಿಸಿದಂತೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9, 11ಎ ಮತ್ತು 11ಬಿ ಗಳನ್ನು ವಿತರಿಸುವುದರಲ್ಲಿ ಇರುವ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ಬಗ್ಗೆ.

ಉಲ್ಲೇಖ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 266 ಗ್ರಾಪಂಅ 2015(ಭಾಗ) ದಿನಾಂಕ:13-01-2016.
2. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 266 ಗ್ರಾಪಂಅ 2015(ಭಾಗ) ದಿನಾಂಕ:15-03-2016.
3. ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 101 ಮುನೋಮು 2015, ದಿನಾಂಕ:29-02-2016.
4. ಸರ್ಕಾರದ ಸುತ್ತೋಲೆ ಸಂಖ್ಯೆ: ಕಂಇ 101 ಮುನೋಮು 2015, ದಿನಾಂಕ:21-12-2016.

****

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳ ಕಡೆಗೆ ತಮ್ಮ ಗಮನ ಸೆಳೆಯಲಾಗಿದೆ. ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯವ್ಯಯ ಮತ್ತು ಲೆಕ್ಕ ಪತ್ರಗಳು) ನಿಯಮಗಳು, 2006 ರ ನಿಯಮ 30 ರಿಂದ ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಇ-ಸ್ವತ್ತು ತಂತ್ರಾಂಶದಿಂದ ತಾತ್ಕಾಲಿಕವಾಗಿ ಮತ್ತು ಮುಂದಿನ ಆದೇಶದವರೆಗೆ ವಿನಾಯಿತಿ ನೀಡಿ ಆದೇಶಿಸಲಾಗಿದೆ.

ಉಲ್ಲೇಖ (2) ರ ಸರ್ಕಾರದ ಪತ್ರದಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ನಮೂನೆ-9 ಮತ್ತು 11ಎ ನ್ನು ಇ-ಸ್ವತ್ತು ತಂತ್ರಾಂಶದ ಮೂಲಕ ಪಂಚಾಯತಿ ಅಭಿವೃದ್ಧಿ ಅಧಿಕಾರಿಯ ಡಿಜಿಟಲ್ ಸಹಿಯ ಮೂಲಕ ವಿತರಿಸಬೇಕಾಗುತ್ತದೆ. ಕ್ರಮಬದ್ಧವಲ್ಲದ ಆಸ್ತಿಗಳಿಗೆ ನಮೂನೆ-11ಬಿ ಯನ್ನು ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯ-ವ್ಯಯ ಮತ್ತು ಲೆಕ್ಕಪತ್ರಗಳು) (2ನೇ ತಿದ್ದುಪಡಿ) ನಿಯಮಗಳು 2013 ರನ್ವಯ ನಿಯಮ, 30 ರಡಿ ನಿಗದಿಪಡಿಸಿರುವ ನಮೂನೆಯಲ್ಲಿಯೇ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ತಾತ್ಕಾಲಿಕವಾಗಿ ಮುಂದಿನ ಆದೇಶದವರೆಗೆ ಕೈಬರಹದಲ್ಲಿ ನೀಡಲು ಹಾಗೂ ನಮೂನೆ 11ಬಿ ಪಡೆಯಲು ಸಾರ್ವಜನಿಕರು 1) ಲಭ್ಯವಿದ್ದರೆ ಪರಿವರ್ತಿತ ಆದೇಶದ ಪ್ರತಿ 2) ಪಹಣಿ ಪತ್ರಿಕೆ, 3) ಫಾರಂ ಬಿಲ್ಡಿಂಗ್‌ಗಳನ್ನು ಗುರುತಿಸಲು ಸಂಬಂಧಿಸಿದ ತಹಶೀಲ್ದಾರ್ / ಕಂದಾಯ ಪರೀವೀಕ್ಷರ ಪ್ರಮಾಣ ಪತ್ರ 4) ಕರ್ನಾಟಕ ಭೂ ಕಂದಾಯ ಅಧಿನಿಯಮ, 1964ರ ಪ್ರಕರಣ 95(2) ರನ್ವಯ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಆಸ್ತಿಗಳಿಗೆ ಸಂಬಂಧಿಸಿದಂತೆ ತಹಶೀಲ್ದಾರ್‌ರವರು ನೀಡಿರುವ ಹಿಂಬರಹದ ಪ್ರತಿಯೊಂದಿಗೆ ಯಾವುದಾದರೂ ಒಂದು ದಾಖಲೆಯನ್ನು ನೀಡಬೇಕಾಗುತ್ತದೆ ಎಂದು ತಿಳಿಸಲಾಗಿದೆ.

ಉಲ್ಲೇಖ(3)ರ ಸರ್ಕಾರದ ಸುತ್ತೋಲೆಯಲ್ಲಿ ಇ-ಸ್ವತ್ತು ತಂತ್ರಾಂಶವನ್ನು ಸಮರ್ಪಕವಾಗಿ ಅನುಷ್ಠಾನ ಮಾಡಲು ಸಾಧ್ಯವಾಗಿಲ್ಲವೆಂಬ ಕಾರಣದಿಂದಾಗಿ 6 ಜಿಲ್ಲೆಗಳಿಗೆ ಮಾತ್ರ ಸೀಮಿತವಾಗುವಂತೆ ಇ-ಸ್ವತ್ತು ತಂತ್ರಾಂಶದಿಂದ ತಾತ್ಕಾಲಿಕವಾಗಿ ಮುಂದಿನ ಆದೇಶದವರೆಗೆ ವಿನಾಯಿತಿ ನೀಡಲಾಗಿದೆ.

ಉಲ್ಲೇಖ(4) ರ ಸರ್ಕಾರದ ಸುತ್ತೋಲೆಯಲ್ಲಿ 6 ಜಿಲ್ಲೆಗಳಲ್ಲಿ ಈಗ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11ಎ ಗಳನ್ನು ವಿತರಿಸಲಾಗುತ್ತಿರುವುದರಿಂದ, ಹಾಗೂ "ಕಾವೇರಿ" ತಂತ್ರಾಂಶ ಮತ್ತು "ಇ-ಸ್ವತ್ತು" ತಂತ್ರಾಂಶವನ್ನು ಸಂಯೋಜನೆಗೊಳಿಸಿರುವುದರಿಂದ ದಿನಾಂಕ:21-12-2016 ರಿಂದ ಜಾರಿಗೆ ಬರುವಂತೆ, ನಮೂನೆ 9 ಮತ್ತು 11ಎ ಗಳಿಗೆ ಮಾತ್ರ ಸಂಬಂಧಿಸಿದ ಮಾಹಿತಿಯನ್ನು "ಇ-ಸ್ವತ್ತು" ತಂತ್ರಾಂಶದಿಂದ ಕಡ್ಡಾಯವಾಗಿ ಪಡೆದು ನೊಂದಣಿ ಮಾಡಲು ಹಾಗೂ 6 ಜಿಲ್ಲೆಗಳಲ್ಲಿ ಕ್ರಮಬದ್ಧವಲ್ಲದ ಸ್ವತ್ತುಗಳಿಗೆ ಸಂಬಂಧಿಸಿದಂತೆ ಕೈಬರಹದ ಮೂಲಕ ನೀಡಲಾಗುವ ನಮೂನೆ 11ಬಿ ಯನ್ನು ಪಡೆದು ನೊಂದಾಯಿಸುವಂತೆ ತಿಳಿಸಲಾಗಿದೆ.

ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಲ್ಲಿ "ಇ-ಸ್ವತ್ತು" ಮತ್ತು "ಕಾವೇರಿ" ತಂತ್ರಾಂಶವು ಡೀಲಿಂಕ್ ಆದಾಗಿನಿಂದ ಮತ್ತು ಲಿಂಕ್ ಆಗಿರುವ ಮಧ್ಯೆ ನೋಂದಣಿಯಾದ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ 9, 11 ಎ ಮತ್ತು 11 ಬಿ ನೀಡುವ ಬಗ್ಗೆ ಈ ಕೆಳಕಂಡಂತೆ ಕ್ರಮ ವಹಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

1. ಮಾಲೀಕರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ನಮೂನೆ 9 ಮತ್ತು 11 ಎ ಅನ್ನು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಿಂದ ಡಿಜಿಟಲ್ ಸಹಿಯ ಮೂಲಕ ಪಡೆದು ಉಪನೊಂದಣಾಧಿಕಾರಿ ಕಛೇರಿಯಲ್ಲಿ ನೊಂದಣಿ ಮಾಡಿದ್ದರೆ ಅಂತಹ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದಲ್ಲಿ ಅರ್ಜಿ ದಾಖಲಿಸಿ ಮುಟೇಷನ್ ಮಾಡುವುದು.
2. ಮಾಲೀಕರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ಒಂದು ವೇಳೆ ನಮೂನೆ 9 ಮತ್ತು 11 ಎ ಅನ್ನು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಿಂದ ಕೈಬರಹದ ಮೂಲಕ ಪಡೆದು ಉಪನೊಂದಣಾಧಿಕಾರಿ ಕಛೇರಿಯಲ್ಲಿ ನೊಂದಣಿ ಮಾಡಿದ್ದರೆ ಅಂತಹ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದಲ್ಲಿ ಅರ್ಜಿ ದಾಖಲಿಸಿ ಮುಟೇಷನ್ ಮಾಡುವುದು.
3. ಕ್ರಮಬದ್ಧವಲ್ಲದ ಆಸ್ತಿಗಳಿಗೆ ನಮೂನೆ 11 ಬಿ ಯನ್ನು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಿಂದ ಕೈಬರಹದ ಮೂಲಕ ಪಡೆದು ಉಪನೊಂದಣಾಧಿಕಾರಿ ಕಛೇರಿಯಲ್ಲಿ ನೊಂದಣಿ ಮಾಡಿದ್ದರೆ ಅಂತಹ ಆಸ್ತಿಗಳಿಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಕೈಬರಹದ ಮೂಲಕ ಮುಟೇಷನ್ ಮಾಡುವುದು.
4. ಒಂದು ವೇಳೆ ಗ್ರಾಮ ಪಂಚಾಯತಿಯಿಂದ ನಮೂನೆ 9, 11ಎ ಮತ್ತು 11 ಬಿ ಪಡೆಯದೆ ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಣಿ ಮಾಡಿದ್ದರೆ ಅಂತಹ ಆಸ್ತಿಗಳಿಗೆ ಯಾವುದೇ ಕಾರಣಕ್ಕೂ ಮುಟೇಷನ್ ಮಾಡತಕ್ಕದ್ದಲ್ಲ.
5. ಮೇಲ್ಕಂಡಂತೆ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ನಮೂನೆ-9, 11ಎ ಮತ್ತು 11ಬಿಗಳು ಕ್ರಮಬದ್ಧವಾಗಿರುವುದನ್ನು ಖಚಿತಪಡಿಸಿಕೊಂಡು ಪ್ರಸ್ತಾವನೆಯನ್ನು ಸಂಬಂಧಿಸಿದ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸತಕ್ಕದ್ದು. ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಈ ರೀತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸಲ್ಲಿಸಿದ ಪ್ರಸ್ತಾವನೆಗಳನ್ನು ಪರಿಶೀಲಿಸಿ ತದನಂತರ ಸಂಬಂಧಿಸಿದ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ ರವರ ಅನುಮೋದನೆ ಪಡೆದು ಕ್ರಮ ವಹಿಸುವುದು.

ತಮ್ಮ ವಿಶ್ವಾಸಿ,

(ಟಿ.ಪಿ. ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಹೊರಡಿಸಿದೆ 15/1/17

ದಿನಾಂಕ.................

ಗ್ರಾ.ಅ.ಪಂ. ಇಲಾಖೆ

ಪ್ರತಿ ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2. ಮಾನ್ಯ ಮೀನುಗಾರಿಕೆ ಹಾಗೂ ಯುವಜನ ಸಬಲೀಕರಣ ಮತ್ತು ಕ್ರೀಡೆ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಕೊಡಗು.
4. ಉಪಕಾರ್ಯದರ್ಶಿಗಳು, ಜಿಲ್ಲಾ ಪಂಚಾಯಿತಿ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಕೊಡಗು.
5. ಶ್ರೀ ಸಮರ್ಥರಾಮ್, ಪ್ರಿನ್ಸಿಪಾಲ್ ಸಿಸ್ಟಂ ಅನಾಲಿಸ್ಟ್, ಎನ್.ಐ.ಸಿ., ಬೆಂಗಳೂರು.